# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ09/ಸಭೆ/ಪಿಆರ್/13/2021-22 ದಿನಾಂಕ 17/04/2021

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ 09 ವಿದ್ಯಾರಣ್ಯಪುರ ವಾರ್ಡ್ ಕಛೇರಿಯಲ್ಲಿ ದಿನಾಂಕ 17/04/2021ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದಅಧಿಕಾರಿ /ನೌಕರರು**

1. ಶ್ರೀ ಶಿವಕುಮಾರ್ ಮುತ್ತುಸ್ವಾಮಿಗೌಡರ್, ನೋಡಲ್ಅಧಿಕಾರಿಹಾಗೂ ಸಹಾಯಕ ಕಾರ್ಯಪಾಲಕಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ
2. ಶ್ರೀ ಸೋಮನಾಥ್ಎಸ್ಜಾಧವ್,ಸಹಾಯಕ ಅಭಿಯಂತರರು&ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ಧನಲಕ್ಷ್ಮಿ, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್ಬಿ
4. ಶ್ರೀ ರಘು ಬಿ.ವಿ, ವಿಪತ್ತು ನಿರ್ವಹಣಾ ವಿಭಾಗ, ಬಿಬಿಎಂಪಿ

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು**

1. ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
2. ಸಾರ್ವಜನಿಕರು

**ಶ್ರೀ ಸೋಮನಾಥ್ಎಸ್ ಜಾಧವ್, ಸಹಾಯಕ ಅಭಿಯಂತರರು**:-ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ನೋಡೆಲ್ಅಧಿಕಾರಿ**: -

ಕೋವಿಡ್ 19 2ನೇ ಅಲೆ ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ರೋಗ ಹರಡುವಿಕೆಯ ಸರಪಳಿಯನ್ನು ತಡೆಯಲು ಪರೀಕ್ಷೆಗಳನ್ನು ನಡೆಸುವುದು ಅತ್ಯವಶ್ಯಕವಾಗಿರುವುದರಿಂದ ಎಲ್ಲಾ ವಸತಿ ಕ್ಷೇಮಾಭಿವೃದ್ದಿ ಸಂಘದ ಸದಸ್ಯರ ಸಹಕಾರದೊಂದಿಗೆ ಸಾರ್ವಜನಿಕರು ಸ್ವಯಂ ಪ್ರೇರಿತರಾಗಿ ಕೋವಿಡ್ ಟೆಸ್ಟ್ ಮಾಡಿಸಿಕೊಳ್ಳಲು ಜನರಲ್ಲಿ ಅರಿವು ಮೂಡಿಸಲು ಹಾಗೂ 45 ವರ್ಷಕ್ಕಿಂತ ಮೇಲ್ಪಟ್ಟ ಎಲ್ಲಾ ಸದಸ್ಯರು ಕಡ್ಡಾಯವಾಗಿ ವ್ಯಾಕ್ಸೀನ್ ಹಾಕಿಸಿಕೊಳ್ಳುವಂತೆ ತಿಳಿಸಿದರು.

ವಾರ್ಡ್ ನಂ.09ರ ವ್ಯಾಪ್ತಿಯಲ್ಲಿ ವಸತಿ ಸಮುಚ್ಚಯ ಹಾಗೂ ವಾಣಿಜ್ಯ ವಹಿವಾಟು ನಡೆಯುವ ಸ್ಥಳಗಳಲ್ಲಿ ಪ್ರತಿ ನಿತ್ಯ ನೂರಾರು ಜನ ಓಡಾಡುವ ಪ್ರಮೇಯ ಇರುವುದರಿಂದ ಕಡ್ಡಾಯವಾಗಿ ಕೋವಿಡ್-19 ರ ಮಾರ್ಗಸೂಚಿ (ಸಾರ್ವಜನಿಕರು 6 ಅಡಿ ಅಂತರವನ್ನು ಕಾಯ್ದುಕೊಳ್ಳುವುದು, ಮಾಸ್ಕ್ ಧರಿಸುವುದು, ಆಗಾಗ ಸ್ಯಾನಿಟೈಸರ್ಅನ್ನು ಉಪಯೋಗಿಸುವುದು) ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಲು ತಿಳಿಸಿರುತ್ತಾರೆ.

ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 09, ವಿದ್ಯಾರಣ್ಯಪುರ

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕಅಭಿಯಂತರರು
ವಿದ್ಯಾರಣ್ಯಪುರ ಉಪವಿಭಾಗ